## ಕರ್ನಾಟಕ ವಿಧಾನ ಪರಿಷತ್ತು

ವಿಷಯ: ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಎ. ತಿಪ್ಪೇಸ್ವಾಮಿ ಇವರು ಶೂನ್ಯ ವೇಳೆಯಲ್ಲಿ "ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿನ ಡಯಾಲಿಸಿಸ್ ಸಿಬ್ಬಂದಿಗಳು ನವೆಂಬರ್-30ರಿಂದ ಕರ್ತವ್ಯಕ್ಕೆ ಗೈರುಹಾಜರಾಗಿ ಬೆಂಗಳೂರು ನಗರದ ಫ್ರೀಡಂಪಾರ್ಕ್ ನಲ್ಲಿ ಅನಿರ್ಧಿಷ್ಟ ಪ್ರತಿಭಟನೆ ಹಮ್ಮಿಕೊಂಡಿದ್ದಾರೆ. ಇದರಿಂದಾಗಿ, ಮೂತ್ರಕೋಶ ಸಮಸ್ಯೆಯಿಂದ ಬಳಲುತ್ತಿರುವ ಬಡವರು ಮತ್ತು ಮಧ್ಯಮ ವರ್ಗದವರು ಡಯಾಲಿಸಿಸ್ ಗಾಗಿ ಸರ್ಕಾರಿ ಆಸ್ಪತ್ರೆಗಳನ್ನು ನೆಚ್ಚಿಕೊಂಡಿದ್ದಾರೆ, ಸಿಬ್ಬಂದಿ ಮುಷ್ಕರದಲ್ಲಿ ಭಾಗಿಯಾಗಿರುವುದರಿಂದ ಡಯಾಲಿಸಿಸ್ ಕೇಂದ್ರಗಳಲ್ಲಿ ಅಗತ್ಯ ಚಿಕಿತ್ಸೆ ಸಿಗದೇ ರೋಗಿಗಳಿಗೆ ತೊಂದರೆಯಾಗಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ನೇಮಕಗೊಂಡಿದ್ದ BRS Agency ಅರ್ಧದಲ್ಲಿ ಕೆಲಸ ಸ್ಥಗಿತಗೊಳಿಸಿತ್ತು. ಆಗ ಸರ್ಕಾರದ ESKAG ಸಂಸ್ಥೆಗೆ ವಹಿಸಲಾಗಿತ್ತು. ಆ ಸಂಸ್ಥೆಯು ಸಹ ಸರಿಯಾಗಿ ಕಾರ್ಯನಿರ್ವಹಿಸದೆ ಸಿಬ್ಬಂದಿಗಳಿಗೆ ಸರಿಯಾಗಿ ವೇತನ ಮತ್ತು ಇತರೆ ಸೌಲಭ್ಯಗಳನ್ನು ನೀಡುತ್ತಿಲ್ಲ. BRS Agency ಯವರು ಕಳೆದ 09 ತಿಂಗಳಿನಿಂದ PF ಮತ್ತು ESI ನೀಡಿಲ್ಲ ಹಾಗೂ ESKEG ಸಂಸ್ಥೆಯವರು 20 ತಿಂಗಳ PF ಮತ್ತು ESI ಕೊಟ್ಟಿಲ್ಲ ಮತ್ತು ಸೇವಾ ಭದ್ರತೆ ನೀಡುತ್ತಿಲ್ಲ. ರಾಜ್ಯ ಸರ್ಕಾರ ಕೂಡಲೇ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸುತ್ತಿದ್ದಾರೆ.

ಆದುದರಿಂದ, ಡಯಾಲಿಸಿಸ್ ಸಿಬ್ಬಂದಿಗಳು ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಸೂಕ್ತ ಕ್ರಮ ಕೈಗೊಂಡು ರೋಗಿಗಳಿಗೆ ಸಮಸ್ಯೆ ಆಗುವುದನ್ನು ತಪ್ಪಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿರುವ ಕುರಿತು".

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:

ಡಯಾಲಿಸಿಸ್ ಸಿಬ್ಬಂದಿಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.

- ಈಗಾಗಲೇ ESI & PF ಗಳಿಗಾಗಿ ರೂ. 4,19,91,833/-ಗಳ ಹಣವನ್ನು ಮೀಸಲಿರಿಸಲಾಗಿದ್ದು (Commit) ನಿಯಮಾನುಸಾರ ಆರ್ಥಿಕ ಇಲಾಖೆ, ಕಾನೂನು ಇಲಾಖೆ ಮತ್ತು ಕಾರ್ಮಿಕ ಇಲಾಖೆಯ ಅನುಮೋದನೆ ಪಡೆದು ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು.
- ಹೆಚ್ಚುವರಿ ವೇತನ ಮತ್ತು Increment ಗಳಿಗಾಗಿ ರೂ.5,79,12,000/-ಗಳ ಹಣವನ್ನು ಮೀಸಲಿರಿಸಲಾಗಿದ್ದು (Commit) ನಿಯಮಾನುಸಾರ ಆರ್ಥಿಕ ಇಲಾಖೆ ಮತ್ತು ಕಾನೂನು ಇಲಾಖೆಯ ಅನುಮೋದನೆ ಪಡೆದು ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು.
- ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ಮತ್ತು ನವೆಂಬರ್ 2023ರ ನಾಲ್ಕು ತಿಂಗಳ ವೇತನವನ್ನು ಜಿಲ್ಲಾ ಆ.ಕು.ಕ ಸೊಸೈಟಿಗೆ ಬಿಡುಗಡೆ ಮಾಡಲಾಗಿದೆ. ಜಿಲ್ಲಾ ಆ.ಕು.ಕ ಸೊಸೈಟಿಯ ವತಿಯಿಂದ ಈಗಾಗಲೇ ಡಯಾಲಿಸಿಸ್ ಸಿಬ್ಬಂದಿಗಳಿಗೆ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಸದರಿ ಡಯಾಲಿಸಿಸ್ ಯೋಜನೆಯು ಪಿ.ಪಿ.ಪಿ ಮಾದರಿಯಲ್ಲಿರುವುದರಿಂದ, ಸರ್ಕಾರದ ವತಿಯಿಂದ ಸಿಬ್ಬಂದಿಗಳಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

Scanned with OKEN Scanner

122 ಸೆಂಟರ್‌ಗಳಲ್ಲಿ ಡಯಾಲಿಸಿಸ್ ಸೇವೆಗಳನ್ನು ಒದಗಿಸುತ್ತಿದ್ದ ESKAG ಸಂಸ್ಥೆಯವರನ್ನು ಬಿಡುಗಡೆಗೊಳಿಸಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಮುಖಾಂತರ ಡಯಾಲಿಸಿಸ್ ಸೇವೆಗಳನ್ನು ದಿನಾಂಕ:01/10/2023 ರಿಂದ ನೀಡಲಾಗುತ್ತಿದೆ. M/s ESKAG ಸಂಸ್ಥೆಯವರನ್ನು ಕಪ್ಪು ಪಟ್ಟಿಗೆ ಸೇರಿಸಲು ಸಹಾ ಕ್ರಮ ಕೈಗೊಳ್ಳಲಾಗಿದೆ.

ಈ ಮೇಲ್ಕಂಡ ಎಲ್ಲಾ ಕ್ರಮಗಳನ್ನು ಕೈಗೊಂಡಿರುವುದರಿಂದ ಡಯಾಲಿಸಿಸ್ ಸಿಬ್ಬಂದಿಗಳು ಮುಷ್ಕರವನ್ನು ಹಿಂಪಡೆದು, ಎಂದಿನಂತೆ ನಿಯೋಜಿತ ಸ್ಥಳಕ್ಕೆ ತೆರಳಿ ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ಕಡತ ಸಂಖ್ಯೆ: ಆಕುಕ /ಶೂವೇ(ಡಯಾಲಿಸಿಸ್)/2023**

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner